ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ
ದಿನಾಂಕ : DATE 31/1/21

ಬಿಎಸ್‌ವೈ ಶ್ಲಾಘನೆ | 2 ಅತ್ಯಾಧುನಿಕ ವಸತಿ ನಿಲಯಗಳಿಗೆ ಶಂಕುಸ್ಥಾಪನೆ

# ಬಾಲಕಿಯರ ಸೈನಿಕ ಶಾಲೆ ಹೆಮ್ಮೆ

31-1-2021

ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಬೆಳಗಾವಿಯ ಕಿತ್ತೂರು ರಾಣಿ ಚನ್ನಮ್ಮ ಸೈನಿಕ ವಸತಿ ಶಾಲೆ ದೇಶದ ಏಕೈಕ ಬಾಲಕಿಯರ ವಸತಿ ಶಾಲೆಯಾಗಿರುವುದು ಹೆಮ್ಮೆಯ ಸಂಗತಿ. ಮಾಜಿ ಸಿಎಂ ಬಿ.ಎಸ್.ಆರ್.ಕಂಠಿ ಅವರ ದೂರದೃಷ್ಟಿ, ಹೆಣ್ಣುಮಕ್ಕಳಿಗೆ ಶಿಕ್ಷಣ ನೀಡಬೇಕೆಂಬ ಸಂಕಲ್ಪದ ಫಲ ಎಂದು ಮುಖ್ಯಮಂತ್ರಿ ಸಿಎಂ ಬಿ.ಎಸ್.ಯಡಿಯೂರಪ್ಪ ಶ್ಲಾಘಿಸಿದರು.

ವಸತಿ ಶಾಲೆಯಲ್ಲಿ ಅತ್ಯಾಧುನಿಕವಾಗಿ ನಿರ್ಮಾಣಗೊಳ್ಳುತ್ತಿರುವ 'ಸರ್ದಾರ್ ವಲ್ಲಭಭಾಯಿ ಪಟೇಲ್' ಹಾಗೂ 'ನೇತಾಜಿ ಸುಭಾಷ್ ಚಂದ್ರ ಬೋಸ್' ವಸತಿ ನಿಲಯಗಳಿಗೆ ಆನ್‌ಲೈನ್ ವೇದಿಕೆ ಮೂಲಕ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ಚಿಕ್ಕದಾಗಿ ಆರಂಭಗೊಂಡ ಈ ಶಾಲೆಯಲ್ಲಿ ಇಂದು 842 ವಿದ್ಯಾರ್ಥಿನಿಯರು ವ್ಯಾಸಂಗ ಮಾಡುತ್ತಿದ್ದಾರೆ. ರಾಜ್ಯ ಮಾತ್ರವಲ್ಲದೆ, ಹೊರ ರಾಜ್ಯದ ಹೆಣ್ಣುಮಕ್ಕಳು ಇಲ್ಲಿ ಕಲಿಯುತ್ತಿರುವುದು ಗುಣಮಟ್ಟದ ಶಿಕ್ಷಣಕ್ಕೆ ಹಿಡಿದ ಕನ್ನಡಿ ಎಂದು ಪ್ರಶಂಸಿಸಿದರು.

**ಚಾರಿತ್ರಿಕ ವ್ಯಕ್ತಿಗಳ ಹೆಸರು:** ಶಾಲೆ ಆವರಣದಲ್ಲಿ ಸರ್ದಾರ್ ವಲ್ಲಭಭಾಯಿ ಪಟೇಲ್ ಹಾಗೂ ನೇತಾಜಿ ಸುಭಾಷ್ ಚಂದ್ರ ಬೋಸ್ ಹೆಸರಿನಲ್ಲಿ ವಸತಿ ನಿಲಯ ಸ್ಥಾಪಿಸುತ್ತಿರುವುದು ಚಾರಿತ್ರಿಕ ಸಂಗತಿ. ಐದು ದಶಕಗಳಿಂದ ಹೆಣ್ಣುಮಕ್ಕಳ ಶಿಕ್ಷಣದ ಸರ್ವಾಂಗೀಣ ಪ್ರಗತಿ ಗಮನದಲ್ಲಿಟ್ಟುಕೊಂಡು ನಡೆಯುತ್ತಿರುವ ವಿಶಿಷ್ಟ ಮತ್ತು ವಿಭಿನ್ನ ಶಾಲೆ ಇದಾಗಿದೆ ಎಂದರು. ಈ ಶಾಲೆಯಲ್ಲಿ ಓದಿದ ವಿದ್ಯಾರ್ಥಿನಿಯರು ಸಮಾಜದಲ್ಲಿ ಉತ್ತಮ ಸ್ಥಾನ ಪಡೆದಿದ್ದು, ರಾಜ್ಯ, ದೇಶಕ್ಕೆ ಕೀರ್ತಿ ತರುತ್ತಿದ್ದಾರೆ ಎಂದು ಹೇಳಿದರು.

**ರಾಷ್ಟ್ರೀಯತೆ ಜಾಗೃತಗೊಳಿಸುವ ಪ್ರಯತ್ನ:** ವಿಧಾನಸಭೆ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಮಾತನಾಡಿ, ವಸತಿ ಶಾಲೆ ವಿದ್ಯಾರ್ಥಿನಿಯರು ನಾವು ಗಂಡು ಮಕ್ಕಳಿಗಿಂತ ಯಾವುದರಲ್ಲೂ ಹಿಂದೆ ಇಲ್ಲ ಎಂಬ ಸಾಹಸ ಪ್ರವೃತ್ತಿ, ಶಿಸ್ತು, ಕಠಿಣ ಜೀವನ ಶೈಲಿ ರೂಪಿಸಿಕೊಳ್ಳಲು ಬೇಕಾದ ವ್ಯವಸ್ಥೆ ಇಲ್ಲಿದೆ. ಉತ್ತಮ ಶಿಕ್ಷಣ, ಸಂಸ್ಕಾರ, ರಾಷ್ಟ್ರೀಯತೆಯನ್ನು ಮಕ್ಕಳಲ್ಲಿ ಜಾಗೃತಗೊಳಿಸುವ ಕೆಲಸವನ್ನು ಈ ಶಾಲೆಯಲ್ಲಿ ಮಾಡಲಾಗುತ್ತಿದೆ. ಶಿಕ್ಷಣ ಸಚಿವನಾಗಿದ್ದಾಗ ಅಲ್ಲಿನ ಎಲ್ಲ ಚಟುವಟಿಕೆ ಗಮನಿಸಿ, ಅಭಿಮಾನಪಟ್ಟಿದ್ದೇನೆ. ರಾಜ್ಯದ ಮಕ್ಕಳ ವಿಶೇಷವಾಗಿ ಹೆಣ್ಣು ಮಕ್ಕಳ ಜೀವನಕ್ಕೆ ಬೇಕಾದ ಶಿಕ್ಷಣ, ಸಂಸ್ಕಾರ, ಸಾಮಾಜಿಕ ಜವಾಬ್ದಾರಿಯನ್ನು ಪರಿಣಾಮಕಾರಿಯಾಗಿ ಕಲಿಸುವ ಕೆಲಸವಾಗುತ್ತಿದೆ. ಈ ಸಂಸ್ಥೆ ದೇಶದಲ್ಲಿ ಮಾದರಿಯಾದ ಸಂಸ್ಥೆಯಾಗಿ ಬೆಳೆಯಲಿ ಎಂದು ಆಶಿಸಿದರು.

ಕಾರ್ಯಕ್ರಮದಲ್ಲಿ ವಿಆರ್‌ಎಲ್ ಸಮೂಹ ಸಂಸ್ಥೆಗಳ ಚೇರ್ಮನ್ ಪದ್ಮಶ್ರೀ ಡಾ. ವಿಜಯ ಸಂಕೇಶ್ವರ, ಶಿಕ್ಷಣ ಸಚಿವ ಸುರೇಶ್ ಕುಮಾರ್, ವಿಧಾನ ಪರಿಷತ್ ಸರ್ಕಾರದ ಮುಖ್ಯ ಸಚೇತಕ ಮಹಾಂತೇಶ್ ಕವಟಗಿಮಠ, ಶಾಸಕ ಮಹಾಂತೇಶ ಕೌಜಲಗಿ, ಎಂಎಲ್‌ಸಿ ಅರವಿಂದ ಅರಳಿ, ತೇಜಸ್ವಿನಿ ಗೌಡ, ಮೋಹನ್ ಕೊಂಡಜ್ಜಿ ಮತ್ತಿತರರು ಉಪಸ್ಥಿತರಿದ್ದರು.

**20 ಕೋಟಿ ರೂ. ವೆಚ್ಚ:** ವಸತಿ ಶಾಲೆ ಆವರಣದಲ್ಲಿ ನಿರ್ಮಿಸಲು ಉದ್ದೇಶಿಸಿರುವ ಎರಡೂ ವಸತಿ ನಿಲಯಗಳು ನಾಲ್ಕು ಮಹಡಿ ಹೊಂದಿರಲಿದ್ದು, ಎರಡೂ ಕಟ್ಟಡಗಳಿಗೆ ತಲಾ 9.95 ಕೋಟಿ ರೂ. ವೆಚ್ಚ ಮಾಡಲಾಗುತ್ತಿದೆ.



ಬೆಳಗಾವಿಯ ಕಿತ್ತೂರು ರಾಣಿ ಚೆನ್ನಮ್ಮ ಸೈನಿಕ ವಸತಿ ಶಾಲೆಯಲ್ಲಿ ನಿರ್ಮಾಣಗೊಳ್ಳುತ್ತಿರುವ ವಸತಿ ನಿಲಯಗಳಿಗೆ ಆನ್‌ಲೈನ್ ವೇದಿಕೆ ಮೂಲಕ ಸಿಎಂ ಯಡಿಯೂರಪ್ಪ ಶಂಕುಸ್ಥಾಪನೆ ನೆರವೇರಿಸಿದರು. ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ, ವಿಆರ್‌ಎಲ್ ಸಮೂಹ ಸಂಸ್ಥೆಗಳ ಚೇರ್ಮನ್ ಪದ್ಮಶ್ರೀ ಡಾ. ವಿಜಯ ಸಂಕೇಶ್ವರ ಮತ್ತಿತರರು ಉಪಸ್ಥಿತರಿದ್ದರು.

## ಕಷ್ಟ ಕಾಲದಲ್ಲಿ ಕೈಹಿಡಿದವರು

ಸೈನಿಕ ಶಾಲೆ ಚೇರ್ಮನ್ ಡಾ.ಮಹೇಂದ್ರ ಕಂಠಿ ಮಾತನಾಡಿ, ಈ ಸಂಸ್ಥೆ ಬಹಳ ಕಷ್ಟದಲ್ಲಿದ್ದಾಗಲೆಲ್ಲ ಸಿಎಂ ಯಡಿಯೂರಪ್ಪ, ವಿಶ್ವೇಶ್ವರ ಹೆಗಡೆ ಕಾಗೇರಿ ಮುಂದೆ ಬಂದು ಸಹಾಯ ಮಾಡಿದ್ದಾರೆ ಎಂದು ಸ್ಮರಿಸಿದರು. ಹೆಣ್ಣು ಮಕ್ಕಳು ಓದಿದರೆ ರಾಷ್ಟ್ರ ಮುಂದೆ ಬರುತ್ತದೆ ಎಂದು ನಮ್ಮ ತಂದೆ ಮತ್ತು ತಾಯಿ ಹೇಳುತ್ತಿದ್ದರು. ನಾವು ಶಿಕ್ಷಣ ಕ್ಷೇತ್ರದಲ್ಲಿ ಹೂಡಿಕೆ ಮಾಡಿದರೆ ತಕ್ಷಣ ಅದರ ಫಲ ಸಿಗುವುದಿಲ್ಲ. ಸಾಕಷ್ಟು ಸಮಯ ಬೇಕು. ಆದರೆ, ಈ ಹೂಡಿಕೆ ವ್ಯರ್ಥವಾಗುವುದಿಲ್ಲ ಎಂದರಲ್ಲದೆ, ಬಡತನ ನಿರ್ಮೂಲನೆಗೆ ಶಿಕ್ಷಣ ಅವಶ್ಯ ಎಂದು ಹೇಳಿದರು.

ಈ ಶಾಲೆ ದೇಶಕ್ಕೇ ಮಾದರಿಯಾಗಬೇಕು. ಯುವಕರಿಗೆ ಉತ್ತಮ ಸಾಧನೆ ಮಾಡಲು ಪ್ರೇರಣೆ ನೀಡಬೇಕು ಎಂದರು.